# ಕರ್ನಾಟಕ ಸರ್ಕಾರದ ನಡವಳಿ

ವಿಷಯ: ಶ್ರೀ ಕೆ.ವಿ. ವೆಂಕಟೇಶಪ್ಪ, ಬಿಲ್ ಕಲೆಕ್ಟರ್, ಕೋಟಗಲ್ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಲೋಕಾಯುಕ್ತ ವಿಚಾರಣೆ ಕುರಿತು – ಅಂತಿಮ ಆದೇಶ ಹೊರಡಿಸುವ ಬಗ್ಗೆ– ಆದೇಶ.

ಓದಲಾಗಿದೆ: ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/292/ಗ್ರಾಪಂಕಾ/2016, ದಿನಾಂಕ:13-06-2016.
ಅಪರ ನಿಬಂಧಕರು, ವಿಚಾರಣೆಗಳು-14, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿದ ವಿಚಾರಣಾ ವರದಿ ಸಂಖ್ಯೆ: Uplok-2/DE-185/2016/ARE-14, ದಿನಾಂಕ:06-12-2018
ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ಇವರ ಶಿಫಾರಸ್ಸು ಸಂಖ್ಯೆ: Uplok-2/DE/185/2016/ARE-14, ದಿನಾಂಕ:11-12-2018.

**ಪ್ರಸ್ತಾವನೆ :**

ಮೇಲೆ ಓದಲಾದ (1)ರ ಸರ್ಕಾರದ ಆದೇಶದಲ್ಲಿ ಶ್ರೀ ಕೆ.ವಿ. ವೆಂಕಟೇಶಪ್ಪ, ಬಿಲ್ ಕಲೆಕ್ಟರ್, ಕೋಟಗಲ್ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧ ಇಲಾಖಾ ವಿಚಾರಣಾ ನಡೆಸಲು ಕರ್ನಾಟಕ ನಾಗರೀಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957ರ ನಿಯಮ 14(ಎ)ರನ್ವಯ ಮಾನ್ಯ ಉಪ ಲೋಕಾಯುಕ್ತರಿಗೆ ವಹಿಸಿ ಆದೇಶಿಸಲಾಗಿದೆ. ಅದರಂತೆ ಅಪರ ನಿಬಂಧಕರು, ವಿಚಾರಣೆಗಳು-14, ಕರ್ನಾಟಕ ಲೋಕಾಯುಕ್ತ ಇವರು ಆರೋಪಿತ ಸರ್ಕಾರಿ ನೌಕರರ ಮೇಲಿನ ಆರೋಪದ ಕುರಿತು. ಕರ್ನಾಟಕ ನಾಗರಿಕ ಸೇವಾ (ವರ್ಗೀಕರಣ, ನಿಯಂತ್ರಣ ಮತ್ತು ಮೇಲ್ಮನವಿ) ನಿಯಮಾವಳಿಗಳು 1957 ರ ನಿಯಮ 11ರ ಅಡಿಯಲ್ಲಿ ಇಲಾಖಾ ವಿಚಾರಣೆ ನಡೆಸಿ ಆಪಾದಿತ ನೌಕರರಾದ ಶ್ರೀ ಕೆ.ವಿ. ವೆಂಕಟೇಶಪ್ಪ, ಬಿಲ್ ಕಲೆಕ್ಟರ್, ಕೋಟಗಲ್ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ಪ್ರಕರಣದಲ್ಲಿ ಇವರ ವಿರುದ್ಧದ ಆರೋಪಗಳು ಸಾಬೀತಾಗಿರುವುದಿಲ್ಲವೆಂದು ಮಾನ್ಯ ಉಪಲೋಕಾಯುಕ್ತರಿಗೆ ಸಲ್ಲಿಸಿರುವ ವರದಿಯಲ್ಲಿ ತಿಳಿಸಿರುತ್ತಾರೆ. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರು ಮೇಲೆ ಓದಲಾದ ಕ್ರಮಾಂಕ (3) ರಲ್ಲಿ ವಿಚಾರಣಾ ವರದಿಯನ್ನು ಅಂಗೀಕರಿಸಿ ಆರೋಪಿತ ನೌಕರರ ವಿರುದ್ಧದ ಆರೋಪಗಳು ಸಾಬೀತಾಗದಿರುವ ಕಾರಣ ವಿಚಾರಣೆ ಪ್ರಕ್ರಿಯೆಯನ್ನು ಕೈಬಿಡಲಾಗಿದೆ ಎಂದು ತಿಳಿಸಿರುವುದರಿಂದ ಸರ್ಕಾರವು ಆಪಾದಿತ ನೌಕರರ ವಿರುದ್ಧದ ವಿಚಾರಣೆಯನ್ನು ಕೈಬಿಟ್ಟು ದೋಷಮುಕ್ತರನ್ನಾಗಿ ಆದೇಶ ಹೊರಡಿಸಲು ಸರ್ಕಾರವು ನಿರ್ಣಯಿಸಿದೆ.

ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/19/ಗ್ರಾಪಂಕಾ/2019, ಬೆಂಗಳೂರು, ದಿನಾಂಕ: 21-03-2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ ಮಾನ್ಯ ಉಪ ಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು ರವರ ಶಿಫಾರಸ್ಸಿನ ಅನ್ವಯ ಸರ್ಕಾರವು, ಶ್ರೀ ಕೆ.ವಿ. ವೆಂಕಟೇಶಪ್ಪ, ಬಿಲ್ ಕಲೆಕ್ಟರ್, ಕೋಟಗಲ್ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ ಇವರ ವಿರುದ್ಧದ ಆರೋಪಗಳು ಸಾಬೀತಾಗದಿರುವುದರಿಂದ ಆಪಾದಿತ ನೌಕರರ ವಿರುದ್ಧದ ಇಲಾಖಾ ವಿಚಾರಣೆಯನ್ನು ಕೈಬಿಟ್ಟು ದೋಷಮುಕ್ತರನ್ನಾಗಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

21/3/19
(ಮುಬಾರಕ್ ಅಹ್ಮದ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮಾನ್ಯ ಉಪಲೋಕಾಯುಕ್ತರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.

3. ಅಪರ ನಿಬಂಧಕರು, ವಿಚಾರಣೆಗಳು–14, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
4. ನಿಬಂಧಕರು, ಕರ್ನಾಟಕ ಲೋಕಾಯುಕ್ತ, ಬೆಂಗಳೂರು.
5. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯಿತಿ, ಚಿಕ್ಕಬಳ್ಳಾಪುರ ಜಿಲ್ಲೆ.
6. ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯಿತಿ ಚಿಂತಾಮಣಿ, ಚಿಕ್ಕಬಳ್ಳಾಪುರ ಜಿಲ್ಲೆ.
7. ಶ್ರೀ ಕೆ.ವಿ. ವೆಂಕಟೇಶಪ್ಪ, ಬಿಲ್ ಕಲೆಕ್ಟರ್, ಕೋಟಗಲ್ ಗ್ರಾಮ ಪಂಚಾಯಿತಿ, ಚಿಂತಾಮಣಿ ತಾಲ್ಲೂಕು, ಚಿಕ್ಕಬಳ್ಳಾಪುರ ಜಿಲ್ಲೆ.
8. ಗಣಕ ಕೋಶ.
9. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.